ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ಯ.ವ/ತಾ.ಮಂ/903 /2017-18.

ಮುಖ್ಯ ಅಭಿಯಂತರರು ಕಛೇರಿ
ಯಲಹಂಕ ವಲಯ
,ಬೃ.ಬೆಂ.ಮ.ಪಾ. ಬೆಂಗಳೂರು -92
ದಿನಾಂಕ: 13/03/2018

ತಾಂತ್ರಿಕ ಮಂಜೂರಾತಿ

ವಿಷಯ:- Improvements to Roads and Drains in Janatha Colony, Hebbal Kempapura in ward no:07,Byatarayanapura

ಉಲ್ಲೇಖ:-1) ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ: ಬೃ.ಬೆಂ.ಮ.ಪಾ./ಅ.ಅ/ ಮು.ಅ /ಅ.ಅ/ /17-18, ದಿನಾಂಕ:

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೊಡಿಗೇಹಳ್ಳಿ ಉಪವಿಭಾಗ) ರವರು ಪಿ-1878ರ ಅಡಿಯಲ್ಲಿ ಪಿಡಬ್ಲೂಡಿ 2015-16ನೇ ಸಾಲಿನ ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದಲ್ಲಿ ಪಿ-1878ರ ಅಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು **ರೂ, 25.00** ಲಕ್ಷಗಳಿಗೆ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:21-07-2015ರಲ್ಲಿ ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ_____ಕ್ರ.ಸಂ 903 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
2. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
3. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
4. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
5. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಮುಖ್ಯ ಅಭಿಯಂತರರು,
ಬ್ಯಾಟರಯನಪುರ ಯಲಹಂಕ ವಲಯ
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

1. ಮಾನ್ಯ ಅಪರ ಆಯುಕ್ತರು, ಬಿ.ಬಿ.ಎಂ.ಪಿ ಯಲಹಂಕ ವಲಯರವರ ಮಾಹಿತಿಗಾಗಿ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.